**<u>ಅಸಲು ದಾವಾ 17/19</u>** **ಪಿ.ಡಬ್ಲ್ಯೂ:- 1**

ದಿನಾಂಕಃ **03-11-2023** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ:- ವಾದಿಯ ಪರ ವಕೀಲರಿಂದ:-</u>

ನಾನು ಈ ದಾವೆಯಲ್ಲಿ ವಾದಿ ಪರ ಜಿ ಪಿ ಎ ದಾರನಾಗಿದ್ದು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದಾಗಿದೆ.

ಜಿ ಪಿ ಎ ಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**1** ಎಂದು, ದಿಃ 05-09-2017 ರ ವಿಭಾಗ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**2** ಎಂದು, ಎಂ ಆರ್ ನಂ. ಹೆಚ್ 4/2017-18 ರ ಮ್ಯುಟೇಷನ್ ರಿಜಿಸ್ಟರ್ ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**3** ಎಂದು, ಸರ್ವೆ ನಂ. 64/3 ಮತ್ತು 64/4 ಕ್ಕೆ ಸಂಬಂಧಿಸಿದಂತೆ ಆರ್ ಟಿಸಿ ಗಳ ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**4** ಮತ್ತು **5** ಎಂದು, ದಿಃ 14-12-2018 ರ ಶುದ್ದ ಕ್ರಯ ಪತ್ರದ ದೃಢೀಕೃತ ನಕಲು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**6** ಎಂದು, ದಿಃ 14-12-2020 ರ ಶುದ್ಧ ಕ್ರಯ ಮೂಲ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**7** ಎಂದು, ದಿಃ 13-11-2020 ರ ಶುದ್ದ ಕ್ರಯ ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**8** ಎಂದು ಗುರುತಿಸಲಾಯಿತು.
ಮುಂದುವರೆದ ಮುಖ್ಯ ವಿಚಾರಣೆಯನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.